ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

5

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಾರಿಗೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 7/4/21

## ಸಾರಿಗೆ ನೌಕರರೊಂದಿಗೆ ಮಾತುಕತೆಯ ಪ್ರಶ್ನೆ ಇಲ್ಲ

# ಮುಷ್ಕರ ಮಣಿಸಲು ಎಸ್ಮಾಸ್ತ್ರ

7-4-21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಬೇಡಿಕೆ ಈಡೇರಿಸುವ ಭರವಸೆ ನೀಡಿದರೂ, ಪ್ರತಿಭಟನೆಗೆ ಮುಂದಾಗಿರುವ ಸಾರಿಗೆ ನೌಕರರ ನಡೆಗೆ ರಾಜ್ಯ ಸರಕಾರ ಕೆಂಡಾಮಂಡಲವಾಗಿದ್ದು, ಕೆಲಸಕ್ಕೆ ಬಾರದಿದ್ದರೆ ಎಸ್ಮಾ ಜಾರಿಗೊಳಿಸುವ ಎಚ್ಚರಿಕೆ ನೀಡಿದೆ.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರು ಬುಧವಾರದಿಂದ ಕರೆ ನೀಡಿರುವ ಅನಿರ್ದಿಷ್ಟಾವಧಿ ಬಸ್ ಬಂದ್‌ಗೆ ರಾಜ್ಯದ ಬಹುತೇಕ ಜಿಲ್ಲೆಯ ಡಿಪೋದಲ್ಲಿ ಬೆಂಬಲ ವ್ಯಕ್ತವಾಗಿರುವುದರಿಂದ, ಇಂದಿನಿಂದ ಸಾರಿಗೆ ವ್ಯವಸ್ಥೆಯಲ್ಲಿ ವ್ಯತ್ಯಾಯವಾಗುವುದು ಬಹುತೇಕ ಖಚಿತವಾಗಿದೆ. ಆದರೆ ಸಾರಿಗೆ ನೌಕರರ ಈ ನಿರ್ಧಾರದಿಂದ ರಾಜ್ಯದ ಸಾರಿಗೆ ವ್ಯವಸ್ಥೆಯ ಮೇಲಾಗುವ ಪರಿಣಾಮವನ್ನು ತಡೆಯುವ ನಿಟ್ಟಿನಲ್ಲಿ ರಾಜ್ಯ ಸರಕಾರ, ಖಾಸಗಿ ಬಸ್, ಮಿನಿ ಬಸ್, ಮ್ಯಾಕ್ಸಿ ಕ್ಯಾಬ್‌ಗಳ ಓಡಾಟಕ್ಕೆ ಅವಕಾಶ ನೀಡಿದೆ. ಆದರೆ ಇದು ಎಷ್ಟರ ಮಟ್ಟಿಗೆ ಯಶಸ್ವಿಯಾಗಲಿದೆ ಎನ್ನುವುದನ್ನು ನೋಡಬೇಕಿದೆ. ಇನ್ನು ಸಾರಿಗೆ ನೌಕರರ ಈ ನಿರ್ಧಾರ ರಾಜ್ಯ ಸರಕಾರ ಹಾಗೂ ಸಾರಿಗೆ ಇಲಾಖೆಯ ಆಕ್ರೋಶಕ್ಕೆ ಕಾರಣವಾಗಿದ್ದು, ವಿನಾಕಾರಣ ರಜೆ ಹಾಕಿದರೆ ಎಸ್ಮಾ ಜಾರಿಗೊಳಿಸಲು ನಿರ್ಧರಿಸಿದೆ.

ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಗೃಹ ಕಚೇರಿ ಕೃಷ್ಣಾದಲ್ಲಿ ಸಾರಿಗೆ ಸಚಿವ ಲಕ್ಷ್ಮಣ್ ಸವದಿ, ಸಾರಿಗೆ ಇಲಾಖಾಧಿಕಾರಿಗಳು ಹಾಗೂ ನಾಲ್ಕು ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಸಭೆ ನಡೆಸಿದರು. ಬಳಿಕ ಈ ಬಗ್ಗೆ ಸಂಬಂಧ ಮಾತನಾಡಿದ ರಾಜ್ಯ ಸರಕಾರ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್, ಆರನೇ ವೇತನ ಆಯೋಗ ಜಾರಿ ಸಾಧ್ಯವಿಲ್ಲ, ಸಾರಿಗೆ ನೌಕರರೊಂದಿಗೆ ಮತ್ತೆ ಮಾತುಕತೆಯ ಪ್ರಶ್ನೆಯೂ ಇಲ್ಲ, ಮುಷ್ಕರಕ್ಕೆ ಮುಂದಾದಲ್ಲಿ ವಿಪತ್ತು ನಿರ್ವಹಣಾ ಕಾಯಿದೆ, ಎಸ್ಮಾ ಸೇರಿದಂತೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕೋವಿಡ್ ಪರಿಸ್ಥಿತಿಯಲ್ಲಿ ಮುಷ್ಕರ ನಡೆಸದಂತೆ ಮನವಿ ಮಾಡಿದ್ದೇವೆ. 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಸಾಧ್ಯವಿಲ್ಲವಾದರೂ ಶೇ.8 ರಷ್ಟು ವೇತನ ಹೆಚ್ಚಳಕ್ಕೆ ಸರಕಾರ ಸಿದ್ಧವಿದೆ. ಆದರೆ ಪ್ರಸಕ್ತ ಉಪಚುನಾವಣೆಯಿರುವ ಕಾರಣ ನೀತಿ ಸಂಹಿತೆ ಜಾರಿಯಲ್ಲಿದೆ. ಆದ್ದರಿಂದ ವೇತನ ಹೆಚ್ಚಳದ ಘೋಷಣೆ ಸಾಧ್ಯವಿಲ್ಲ. ಪ್ರತಿನಿತ್ಯ 4 ಕೋಟಿ ನಷ್ಟ ಆಗುತ್ತಿದೆ ಆಗಿದ್ದರೂ ಸಂಬಳ ನೀಡಿದ್ದೇವೆ, ಶೇ.8 ರಷ್ಟು ಹೈಕ್ ಮಾಡಲು ಚುನಾವಣಾ ಆಯೋಗಕ್ಕೆ ಪತ್ರ ಬರೆದಿದ್ದೇವೆ. ಒಂದುವೇಳೆ ಚುನಾವಣಾ ಆಯೋಗ ಅನುಮತಿ ನೀಡಿದರೆ ಘೋಷಣೆ ಮಾಡುತ್ತೇವೆ ಎಂದರು.

**ನಿರ್ವಹಿಸಲು ಸಜ್ಜಾಗಿದ್ದೇವೆ:** ಸಾರಿಗೆ ನೌಕರರು ಮುಷ್ಕರ ನಡೆಸಿದರೆ ಅದಕ್ಕೆ ಪರ್ಯಾಯವಾಗಿ ನಿರ್ವಹಣೆ ಮಾಡಲು ಸಾರಿಗೆ ಇಲಾಖೆ ಸಿದ್ಧವಾಗಿದೆ.

→ 4

### ಖಾಸಗಿ ವಾಹನ ಬಳಕೆಗೆ ಒಪ್ಪಿಗೆ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಒಕ್ಕೂಟ ಏ.7 ರಂದು ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗ ಬಾರದೆಂಬ ಉದ್ದೇಶದಿಂದ ಸರಕಾರ ಖಾಸಗಿ ವಾಹನಗಳನ್ನು ಬಳಸಿಕೊಳ್ಳಲು ಆದೇಶಿಸಿದೆ. ಈ ಸಂಬಂಧ ಮುಖ್ಯ ಸಂಚಾರ ವ್ಯವಸ್ಥಾಪಕರು ಹೊರಡಿಸಿರುವ ಆದೇಶದಲ್ಲಿ ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯ ನೀಡುವಲ್ಲಿ ಯಾವುದೇ ವೈಫಲ್ಯಗಳು ಆಗಬಾರದೆಂಬ ದೃಷ್ಟಿಯಿಂದ ಖಾಸಗಿ ಮತ್ತು ಶಾಲಾ ವಾಹನಗಳನ್ನು ಮುಷ್ಕರದ ಅವಧಿಯಲ್ಲಿ ಬಳಸಿಕೊಂಡು ಸಾರ್ವಜನಿಕರಿಗೆ ಸೂಕ್ತ ಸಾರಿಗೆ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳುವಂತೆ ಸಾರಿಗೆ ಆಯುಕ್ತರು ತಿಳಿಸಿದಂತೆ ಆಯಾ ಜಿಲ್ಲಾಡಳಿತಗಳ ವತಿಯಿಂದ ಸೂಕ್ತ ಕ್ರಮ ಕಯಗೊಳ್ಳಲಾಗುತ್ತಿದೆ. ಖಾಸಗಿ ವಾಹನಗಳನ್ನು ನಿಗಮದ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲು ಮತ್ತು ಬಸ್ ನಿಲ್ದಾಣಗಳಲ್ಲಿ ನಿಲ್ಲಿಸಿಕೊಳ್ಳಲು ಅನುಮತಿ ನೀಡುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಕೋರಲಾಗಿದೆ.

### ಮಂಗಳವಾರವೇ ಪರದಾಟ

ಸಾರಿಗೆ ನೌಕರರ ಮುಷ್ಕರದ ಕಾವು ಮಂಗಳವಾರ ಮಧ್ಯಾಹ್ನದ ನಂತರವೇ ಶುರುವಾಗಿದ್ದರಿಂದ ಸಾರ್ವಜನಿಕರು ಬಸ್‌ಗಳಿಗೆ ಪರದಾಡಿದ ಪರಿಸ್ಥಿತಿ ಉಂಟಾಗಿತ್ತು. ಬೆಳಗ್ಗೆ ಜನರಲ್ ಶಿಫ್ಟ್‌ನಲ್ಲಿ ಕರ್ತವ್ಯ ಆರಂಭಿಸಿರುವ ಬಸ್‌ಗಳು ಮಾತ್ರ ಕಾರ್ಯಾಚರಣೆಯಲ್ಲಿದ್ದು, ಸೆಕೆಂಡ್ ಶಿಫ್ಟ್ ಅಂದರೆ ರಾತ್ರಿ ತಂಗಬೇಕಾದ ಕರ್ತವ್ಯದ ಸಿಬ್ಬಂದಿ ಕರ್ತವ್ಯಕ್ಕೆ ಹಾಜರಾಗಿಲ್ಲ. ಹೀಗಾಗಿ, ಮಧ್ಯಾಹ್ನದ ನಂತರ ಬಸ್‌ಗಳ ಕಾರ್ಯಾಚರಣೆ ಆರಂಭವಾಗಿಲ್ಲ. ಡಿಪೋಗಳಲ್ಲಿ ಬಸ್‌ಗಳು ನಿಂತಲ್ಲೇ ನಿಂತಿದ್ದವು. ಬಿಎಂಟಿಸಿಯ 6 ಸಾವಿರಕ್ಕೂ ಹೆಚ್ಚು ಬಸ್‌ಗಳು ಸೇರಿ ನಾಲ್ಕು ನಿಗಮಗಳ ಸುಮಾರು 20 ಸಾವಿರ ಬಸ್‌ಗಳ ಕಾರ್ಯಾಚರಣೆ ಬುಧವಾರ ಸ್ಥಗಿತವಾಗಲಿದೆ. ಬಿಎಂಟಿಸಿಯ 30 ಲಕ್ಷ ಪ್ರಯಾಣಿಕರು ಸೇರಿ 1 ಕೋಟಿಯಷ್ಟು ಪ್ರಯಾಣಿಕರು ತೊಂದರೆ ಅನುಭವಿಸಲಿದ್ದಾರೆ ಎಂದು ಅಂದಾಜಿಸಲಾಗಿದೆ.

### ಮೆಟ್ರೊ ಸಂಚಾರ ಹೆಚ್ಚಳ

ಸಾರಿಗೆ ಸಂಸ್ಥೆ ನೌಕರರ ಮುಷ್ಕರದಿಂದ ಬಸ್ ಸಂಚಾರ ವ್ಯತ್ಯಯವಾಗುವ ನಿಟ್ಟಿನಲ್ಲಿ, ಬೆಂಗಳೂರು ಮೆಟ್ರೊ ರೈಲು ನಿಗಮವು ಬುಧವಾರ ಹೆಚ್ಚು ರೈಲುಗಳ ಸೇವೆ ಒದಗಿಸಲು ಮುಂದಾಗಿದೆ. ಅಂದರೆ, ರೈಲುಗಳ ನಡುವಿನ ಸಂಚಾರ ಸಮಯವನ್ನು ಅಥವಾ ಕಾಯುವ ಸಮಯವನ್ನು ತಗ್ಗಿಸಲಾಗಿದೆ. ಏ.7ರಂದು ಬೆಳಗ್ಗೆ 7ರಿಂದ ರಾತ್ರಿ 9ರವರೆಗೆ ನೇರಳೆ ಮಾರ್ಗದಲ್ಲಿ 4.5 ನಿಮಿಷಕ್ಕೆ ಒಂದು, ಹಸಿರು ಮಾರ್ಗದಲ್ಲಿ 5 ನಿಮಿಷಕ್ಕೆ ಒಂದು ರೈಲು ಸಂಚರಿಸಲಿದೆ. ಸಾಮಾನ್ಯ ದಿನಗಳಲ್ಲಿ ದಟ್ಟಣೆಯ ಅಲ್ಲದ ಸಂದರ್ಭದಲ್ಲಿ ನೇರಳೆ ಮಾರ್ಗದಲ್ಲಿ 10 ನಿಮಿಷಕ್ಕೊಂದು, ಹಸಿರು ಮಾರ್ಗದಲ್ಲಿ 12 ನಿಮಿಷಕ್ಕೊಂದು ರೈಲು ಸಂಚರಿಸುತ್ತಿತ್ತು. ಸಾರ್ವಜನಿಕರು ಮೆಟ್ರೊ ಸ್ಮಾರ್ಟ್ ಕಾರ್ಡ್ ಬಳಸಿ ಪ್ರಯಾಣಿಸಬಹುದು.

# ಮುಷ್ಕರ ಮಣಿಸಲು ಎಸ್ಮಾಸ್ತ್ರ

← ಮೊದಲಪುಟದಿಂದ

ಮುಷ್ಕರ ಮಾಡಿದರೆ ಪರ್ಯಾಯ ವ್ಯವಸ್ಥೆಗೂ ಚಿಂತನೆ ನಡೆಸಿದ್ದು, ಟ್ಯಾಕ್ಸಿ, ಮ್ಯಾಕ್ಸಿ ಕ್ಯಾಬ್ ಸೇರಿದಂತೆ ಎಲ್ಲಾವನ್ನೂ ಪರವಾನಗಿ ಕೇಳದೆ ಸಂಚಾರಕ್ಕೆ ಅವಕಾಶ ಕಲ್ಪಿಸುತ್ತೇವೆ. ರೂಟ್, ಪರ್ಮಿಟ್ ಇಲ್ಲದೆ ಸಂಚಾರಕ್ಕೆ ಅನುವು ಮಾಡಿ ಕೊಡಲಾಗುತ್ತದೆ. ಬುಧವಾರದ ಮುಷ್ಕರದ ವೇಳೆ ಗುಂಪು ಗುಂಪು ಸೇರು ವಂತಿಲ್ಲ, ಕೋವಿಡ್ ನಿಯಮ ಉಲ್ಲಂಘಿಸುವಂತಿಲ್ಲ, ಸಾರ್ವ ಜನಿಕ ಆಸ್ತಿಪಾಸ್ತಿಗಳಿಗೆ ಹಾನಿ ಮಾಡು ವಂತಿಲ್ಲ, ಟ್ಯಾಕ್ಸಿ, ಮ್ಯಾಕ್ಸಿ ಕ್ಯಾಬ್‌ಗೆ ದರ ನಿಗದಿ ಮಾಡುತ್ತೇವೆ. ಆ ದರದಂತೆ ಹಣ ವಸೂಲಿ ಮಾಡಬೇಕು. ರಜೆ, ಹಬ್ಬ ಇರುವುದರಿಂದ ವಿಶೇ ಷ ರೈಲು ವ್ಯವಸ್ಥೆ ಮಾಡಲು ರೈಲ್ವೇ ಇಲಾಖೆ ಜತೆ ಮಾತನಾಡುವುದಾಗಿ ಸ್ಪಷ್ಟಪಡಿಸಿದರು.

ಮುಷ್ಕರ ಮಾಡಿದರೆ ಕಾನೂನು ಚೌಕಟ್ಟಿನಲ್ಲಿ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ. ಯಾವುದೇ ಕಾರಣಕ್ಕೂ ಮತ್ತೆ ಸಂಧಾನ ಇಲ್ಲ. ಆದರೂ ಮುಷ್ಕರ ನಡೆಸಿದಲ್ಲಿ ಎನ್‌ಡಿಎಂಎ, ಎಸ್ಮಾ ಸೇರಿದಂತೆ ಯಾವುದಾದರೂ ಆಗಬಹುದು. ಒಟ್ಟಿನಲ್ಲಿ ಕಠಿಣ ಕ್ರಮ ಖಚಿತ.

– ಪಿ. ರವಿಕುಮಾರ್ ಸರಕಾರದ ಮುಖ್ಯಕಾರ್ಯದರ್ಶಿಬೆಂಗಳೂರು

## ಕೋಡಿಹಳ್ಳಿ ವಿರುದ್ಧ ದೂರು

ಮುಷ್ಕರದ ನೇತೃತ್ವ ವಹಿಸಿರುವ ಸಾರಿಗೆ ನೌಕರರ ಕೂಟದ ಗೌರವಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ವಿರುದ್ಧ ಬಿಎಂಟಿಸಿ ನೌಕರ ತ್ಯಾಗರಾಜ್ ಎಂಬುವರು ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಸಿ.ಶಿಖಾ ಅವರಿಗೆ ದೂರು ನೀಡಿದ್ದಾರೆ. ಸಾರ್ವಜನಿಕರಿಗೆ ಸೇವೆ ನೀಡುವುದು ನಮ್ಮ ಧ್ಯೇಯ. ಮುಷ್ಕರದ ವೇಳೆ ಅಹಿತಕರ ಘಟನೆ ನಡೆದರೆ ಕೋಡಿಹಳ್ಳಿ ಚಂದ್ರಶೇಖರ್ ಅವರೇ ಹೊಣೆ' ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.